ಗಲಭೆಗಳ ಸಂದರ್ಭದಲ್ಲಿ ಹೂಡಲಾದ ಕೇಸ್‌ಗಳನ್ನು ವಾಪಸು ಪಡೆಯುವುದು
(224) 355

ಶ್ರೀ ಖಾದರ್ ಯು.ಟಿ

ಅ) 2007–08ನೇ ಸಾಲಿನ ಉಳ್ಳಾಲದಲ್ಲಿ ನಡೆದ ಗಲಭೆಗಳ ಸಂದರ್ಭದಲ್ಲಿ ನಿರಪರಾಧಿ ಯುವಕರು ಮತ್ತು ವಿದ್ಯಾರ್ಥಿಗಳ ಮೇಲೆ ಮೊಕದ್ದಮೆ ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ವಿದ್ಯಾರ್ಥಿ ಮತ್ತು ಯುವಕರ ಭವಿಷ್ಯದ ದೃಷ್ಟಿಯಿಂದ ಈ ಎಲ್ಲಾ ಮೊಕದ್ದಮೆಗಳನ್ನು ಸರ್ಕಾರವು ಹಿಂತೆಗೆದುಕೊಳ್ಳುವುದೇ?

ಶ್ರೀ ಆರ್. ಅಶೋಕ್ ಉಪ ಮುಖ್ಯಮಂತ್ರಿ (ಗೃಹ ಮತ್ತು ಸಾರಿಗೆ)

ಅ) ಸರ್ಕಾರದ ಗಮನಕ್ಕೆ ಬಂದಿದೆ

ಆ) ಈ ಪ್ರಕರಣಗಳನ್ನು ದಾಖಲಿಸುವಾಗ ಯಾರ್ಯಾರು ಪ್ರಕರಣದಲ್ಲಿ ಭಾಗಿಯಾಗಿರುತ್ತಾರೋ ಅವರುಗಳ ಮೇಲೆ ಪಿರ್ಯಾದಿನ ಆಧಾರದ ಮೇಲೆ ಪ್ರಕರಣಗಳು ದಾಖಲಾಗಿದೆ. ಈ ಪ್ರಕರಣಗಳಲ್ಲಿ ನಿಷ್ಪಕ್ಷಪಾತವಾಗಿ ತನಿಖೆ ಮಾಡಿ ನ್ಯಾಯಾಲಯಕ್ಕೆ ಅಂತಿಮ ವರದಿಯನ್ನು ಸಲ್ಲಿಸಲಾಗಿದೆ. ಈ ಪ್ರಕರಣಗಳನ್ನು ಹಿಂತೆಗೆದುಕೊಳ್ಳುವುದರಿಂದ ಈ ಕೃತ್ಯದಲ್ಲಿ ಪಾಲ್ಗೊಂಡ ಆರೋಪಿಗಳು ಮುಂದೆಯೂ ಕೂಡಾ ಇಂತಹ ಕೃತ್ಯಗಳನ್ನು ಮುಂದುವರಿಸಿ ಕಾನೂನು ಸುವ್ಯವಸ್ಥೆಗೆ ಅಡ್ಡಿ ಪಡಿಸಿ ಮತ್ತು ಸಾರ್ವಜನಿಕರ ಜೀವ ಹಾಗೂ ಸೊತ್ತು ಹಾನಿಗೊಳಿಸುವ ಸಾಧ್ಯತೆ ಹೆಚ್ಚಾಗಿರುತ್ತದೆ. ಆದುದರಿಂದ ಈ ಪ್ರಕರಣಗಳನ್ನು ಹಿಂಪಡೆಯುವುದು ಸೂಕ್ತವಲ್ಲವೆಂದು ಅಭಿಪ್ರಾಯ ಪಡಲಾಗಿದೆ.

ನೆಮ್ಮದಿ ಕೇಂದ್ರಗಳು ವಿಫಲವಾಗಿರುವುದು
(207) 280

ಮಾನ್ಯ ಶ್ರೀ ಈಶ್ವರ ಭೀಮಣ್ಣ ಖಂಡ್ರೆ (ಭಾಲ್ಕಿ) ವಿಧಾನ ಸಭೆಯ ಸದಸ್ಯರು

ಅ) ಭಾಲ್ಕಿ ತಾಲ್ಲೂಕಿನಲ್ಲಿ ಎಷ್ಟು ನೆಮ್ಮದಿ ಕೇಂದ್ರಗಳಿವೆ (ವಿವರ ನೀಡುವುದು)

ಆ) ಅಟಲ್‌ಜಿ ಸ್ನೇಹಿ ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?